ಕ್ರ.ಸಂ. 01

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮಧು ಜಿ. ಮಾದೇಗೌಡ,**
**ಶ್ರೀ ಎಸ್.ಎಲ್ ಭೋಜೇಗೌಡ, ಶ್ರೀ ಮರಿತಿಬ್ಬೇಗೌಡ ಹಾಗೂ ಶ್ರೀ ಶಶೀಲ್ ಜಿ. ನಮೋಶಿ**
**ಇವರು ಮಂಡಿಸಿರುವ ನಿಯಮ-330ಕ್ಕೆ ಉತ್ತರ**

**ವಿಷಯ:-**

**ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಜನವರಿ 2016 ರಿಂದ ಇದುವರೆವಿಗೂ ಸಾಕಷ್ಟು ಬೋಧಕ/ಬೋಧಕೇತರ ಹುದ್ದೆಗಳು ನಿವೃತ್ತಿ, ರಾಜೀನಾಮೆ ಇನ್ನಿತರೆ ಕಾರಣಗಳಿಂದ ಖಾಲಿ ಬಿದ್ದಿವೆ. ಖಾಲಿ ಇರುವ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡದೆ ಇರುವುದರಿಂದ ಅನುದಾನಿತ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳ ಬೋಧನೆಗೆ ತುಂಬಾ ತೊಂದರೆಯಾಗುತ್ತಿದೆ. ಅಲ್ಲದೆ ಕೆಲವು ಶಾಲಾ ಕಾಲೇಜುಗಳನ್ನು ಮುಚ್ಚುವ ಪರಿಸ್ಥಿತಿ ಉಂಟಾಗಿರುವ ಗಂಭೀರ ಸಮಸ್ಯೆಯನ್ನು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರಲ್ಲಿ ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದರಿಂದ ಅವುಗಳಲ್ಲಿನ ಅನುದಾನಿತ ಬೋಧಕ ಹುದ್ದೆಗಳು ಖಾಲಿಯಾದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರಿಂದ ಮಾತ್ರ ತುಂಬಲು ಸುತ್ತೋಲೆ ಸಂಖ್ಯೆ: ಇಡಿ 267 ಪಿಎಂಸಿ 2007 ದಿನಾಂಕ: 12.10.2007ರನ್ವಯ ಸೂಚಿಸಲಾಗಿದ್ದು, ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶವಿರುವುದಿಲ್ಲ.

ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:01.01.2016 ರಿಂದ 31.12.2020ರವರೆಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿಯಾಗಿರುವ 4521 ಬೋಧಕ ಹುದ್ದೆಗಳನ್ನು ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ 267 ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿ ನೀಡುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ 2016 ರಿಂದ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಇಲಾಖೆಯು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅಡ್ಡಿಯಾಗದಂತೆ ಆಯಾ ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಯಭಾರ ಕೊರತೆಯಿರುವ ಉಪನ್ಯಾಸಕರನ್ನು ಹತ್ತಿರದ ಅಗತ್ಯವಿರುವ ಅನುದಾನಿತ ಪದವಿಪೂರ್ವ ಕಾಲೇಜುಗಳಿಗೆ ನಿಯೋಜನೆಗೊಳಿಸುವ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ: ಇಪಿ 537 ಎಸ್ಇಎಸ್ 2023**

**(ಎಸ್. ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಸಚಿವರು**